# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 430 |
| 2 | ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 15-02-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಚುನಾವಣೆಗಳನ್ನು ಯಾವಾಗ ನಡೆಸಲಾಗುವುದು; ಸದರಿ ಚುನಾವಣೆಗಳು ನಿಗಧಿತ ಅವಧಿಯಲ್ಲಿ ನಡೆಯದೆ ಮೂರು ವರ್ಷಗಳು ಕಳೆದಿದ್ದು ಇದರಿಂದ ಅಧಿಕಾರ ವಿಕೇಂದ್ರೀಕರಣಕ್ಕೆ ಧಕ್ಕೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸ್ಥಳೀಯ ಸಂಸ್ಥೆಗಳೊಂದಾಗಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಾವಾಗ ಚುನಾವಣೆಗಳನ್ನು ನಡೆಸಲಾಗುವುದು; | ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ 36) ಅನ್ನು "ದಿನಾಂಕ:15-05-2025" ರಿಂದ ಜಾರಿಗೊಳಿಸಲಾಗಿದೆ. ಮುಂದುವರೆದು, "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ" ವ್ಯಾಪ್ತಿಯ ಪ್ರದೇಶವನ್ನು "ಗ್ರೇಟರ್ ಬೆಂಗಳೂರು ಪ್ರದೇಶ" ವೆಂದು ಗೊತ್ತುಪಡಿಸಲಾಗಿರುತ್ತದೆ.<br><br>ಅಧಿನಿಯಮದ 5ನೇ ಪ್ರಕರಣದಲ್ಲಿ ಗರಿಷ್ಠ 7 ನಗರಪಾಲಿಕೆಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. ಕಾಲಮಿತಿಯಲ್ಲಿ ನಗರಪಾಲಿಕೆಗಳು ರಚನೆಗೊಂಡ ನಂತರ ಸದರಿ ಅಧಿನಿಯಮದ ಪ್ರಕರಣ 29ರಂತೆ ವಾರ್ಡ್‌ಗಳ ಪುನರ್ ವಿಂಗಡಣೆಯ ಬಳಿಕ ಚುನಾವಣಾ ಪ್ರಕ್ರಿಯೆ ಪ್ರಾರಂಭಗೊಳ್ಳುತ್ತದೆ. |
| ಆ | ಬೆಂಗಳೂರು ನಗರ ವಿಶ್ವದಲ್ಲಿ ಅತೀ ವೇಗವಾಗಿ ಬೆಳೆಯುತ್ತಿರುವ ನಗರವಾಗಿದ್ದು, ಇಲ್ಲಿನ ನಾಗರೀಕರು ಟ್ರಾಫಿಕ್ ಸಮಸ್ಯೆಯಿಂದ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಟ್ರಾಫಿಕ್ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬಿ.ಬಿ.ಎಂ.ಪಿ.ಯ ವತಿಯಿಂದ ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿಯಲ್ಲಿ ಸುಗಮ ಸಂಚಾರ ಶೀರ್ಷಿಕೆ ಅಡಿಯಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯಿಂದ ನಗರದಲ್ಲಿ ವಾಹನ ದಟ್ಟಣೆಯನ್ನು ಕಡಿಮೆ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಬೆಂಗಳೂರು ನಗರ ಸಂಚಾರ ಪೋಲೀಸ್ ವಿಭಾಗದಿಂದ ವತಿಯಿಂದ ಸಂಚಾರ ದಟ್ಟಣೆಯನ್ನು ನಿವಾರಿಸಲು ಕೈಗೊಂಡಿರುವ ಕ್ರಮಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ | ಬೆಂಗಳೂರು ನಗರ ಟ್ರಾಫಿಕ್ ಸಮಸ್ಯೆಗಳನ್ನು ಸಮರ್ಪಕವಾಗಿ ನಿವಾರಿಸಲು ಸಂಸ್ಥೆಗಳಾದ ಬಿಎಂಟಿಸಿ ಮತ್ತು ಬಿಎಂಆರ್‌ಸಿಎಲ್ ಸಮನ್ವಯವಾಗಿ ಕಾರ್ಯನಿರ್ವಹಿಸಿದ್ದಲ್ಲಿ ಬೆಂಗಳೂರು ಟ್ರಾಫಿಕ್ ಸಮಸ್ಯೆಯನ್ನು ಬಹುತೇಕ ನಿವಾರಿಸಬಹುದಾಗಿರುವುದರಿಂದ ಬಿಎಂಟಿಸಿ ಮತ್ತು ಬಿಎಂಆರ್‌ಸಿಎಲ್ ಸಮನ್ವಯವಾಗಿ ಮತ್ತು ಆಯೋಜಿತವಾಗಿ ಕಾರ್ಯನಿರ್ವಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಮಾಹಿತಿ ನೀಡುವುದು? | ವಿವಿಧ ಪೌರಸಂಸ್ಥೆಗಳಾದ ಬಿ.ಬಿ.ಎಂ.ಪಿ, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಿ.ಎಂ.ಟಿ.ಸಿ, ಬೆಸ್ಕಾಂ, ಹಾಗೂ ಶಿಕ್ಷಣ ಅಧಿಕಾರಿಗಳನ್ನು ಒಳಗೊಂಡಂತೆ ಬೆಂಗಳೂರು ನಗರ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯನ್ನು 3 ತಿಂಗಳಿಗೊಮ್ಮೆ ಆಯೋಜಿಸಲಾಗುತ್ತಿದ್ದು, ಸದರಿ ಸಭೆಯಲ್ಲಿ ರಸ್ತೆ ಸುರಕ್ಷತೆ ಹಾಗೂ ಸಂಚಾರ ದಟ್ಟಣೆಯನ್ನು ತಿಳಿಗೊಳಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಿರ್ಣಯ ಗಳನ್ನು ಕೈಗೊಂಡು, ಕೈಗೊಂಡ ನಿರ್ಣಯಗಳನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.<br><br>ಸಂಚಾರ ಪೋಲೀಸ್ ವಿಭಾಗವು ಬಿ.ಎಂ.ಟಿ.ಸಿ. ಹಾಗೂ ಬಿ.ಎಂ.ಆರ್.ಸಿ.ಎಲ್.ಸಂಸ್ಥೆಗಳೊಂದಿಗೆ ಸಮನ್ವಯತೆಯನ್ನು ಹೊಂದಿ ಕರ್ತವ್ಯ ನಿರ್ವಹಿಸುತ್ತಿದೆ. |

ಸಂಖ್ಯೆ: ನಅಇ 45 ಬಿಬಿಎಸ್ 2024

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ